# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 47 | Pages. 2 | Date: 17-01-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 47 – ಪುಟಗಳು : 2 | 17-01-2026 | ಶನಿವಾರ | Ph: 8762954248 | ದರ : ₹1


# ಕೃಷ್ಣಬೈರೇಗೌಡ ಜನಸ್ಪಂದನ ಕಾರ್ಯಕ್ರಮಕ್ಕೆ ಜನಸಾಗರ

# ಸಕಲೇಶಪುರದಲ್ಲಿ ಸಾವಿರಕ್ಕೂ ಅಧಿಕ ಅರ್ಜಿಗಳ ಸಲ್ಲಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ ಶೀಘ್ರ ಪರಿಹಾರ ಒದಗಿಸುವ ಉದ್ದೇಶದಿಂದ ಕ್ಷೇತ್ರವಾರು ಜನಸ್ಪಂದನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿ ಆಯೋಜಿಸಲಾಗಿದ್ದ ಜನಸ್ಪಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಾಸಕ ಸಿಮೆಂಟ್ ಮಂಜು ಅವರ ಮನವಿಯ ಮೇರೆಗೆ ಈ ಕಾರ್ಯಕ್ರಮವನ್ನು ಸಕಲೇಶಪುರದಲ್ಲಿ ಆಯೋಜಿಸಲಾಗಿದೆ ಎಂದರು. ಸಾರ್ವಜನಿಕರಿಂದ ಬಂದ ಅರ್ಜಿಗಳನ್ನು ನೈಜತೆಯ ಆಧಾರದಲ್ಲಿ ಪರಿಶೀಲಿಸಿ, ಪ್ರಾಮಾಣಿಕವಾಗಿ ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಿಸಲಾಗುವುದು. ಅರ್ಜಿಗಳನ್ನು ಆನ್ ಲೈನ್ ಮೂಲಕ ಸ್ವೀಕರಿಸಲಾಗಿರುವುದರಿಂದ, ಸಮಸ್ಯೆ ಪರಿಹಾರವಾಗುವವರೆಗೆ ಪ್ರತಿಯೊಂದು ಹಂತದಲ್ಲೂ ನಿಗಾ ವಹಿಸಲಾಗುವುದು ಎಂದು ತಿಳಿಸಿದರು.

ಒಂದೇ ರೀತಿಯ ಸಮಸ್ಯೆಗಳ ಕುರಿತು ಅನೇಕರು ಅರ್ಜಿ ಸಲ್ಲಿಸಿರುವ ಸಾಧ್ಯತೆ ಇದ್ದು, ಇಂತಹ ಸಂದರ್ಭಗಳಲ್ಲಿ ಪ್ರತಿನಿಧಿ ಪ್ರಕರಣಗಳಿಗೆ ಉತ್ತರ ನೀಡಲಾಗುವುದು. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಸಂಕ್ಷಿಪ್ತವಾಗಿ ವಿವರಿಸಬೇಕು. ಇದು ಕೇವಲ ತೋರ್ಪಡಿಕೆಗಾಗಿ ನಡೆಸುವ ಕಾರ್ಯಕ್ರಮವಲ್ಲ; ಪ್ರಾಮಾಣಿಕವಾಗಿ ಸಮಸ್ಯೆ ಪರಿಹರಿಸುವ ಉದ್ದೇಶದಿಂದಲೇ ಈ ಜನಸ್ಪಂದನ ಆಯೋಜಿಸಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

ವೈಯಕ್ತಿಕ ವ್ಯಾಜ್ಯಗಳನ್ನು ಬಗೆಹರಿಸುವುದು ಕಷ್ಟವಾಗಿದ್ದು, ಪರಿಹರಿಸಬಹುದಾದ ಸಾರ್ವಜನಿಕ ಸಮಸ್ಯೆಗಳಿಗೆ ಜಿಲ್ಲಾಡಳಿತ ಸಂಪೂರ್ಣ ಸಿದ್ಧವಿದೆ. ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ವ್ಯಾಜ್ಯಗಳನ್ನು ಇಲ್ಲಿಗೆ ತರುವುದನ್ನು ತಪ್ಪಿಸಬೇಕು. ಸಮಸ್ಯೆ ಇದೆ ಎಂದು ಹೇಳಿ ಅಧಿಕಾರಿಗಳು ಕೈಕಟ್ಟಿ ಕುಳಿತುಕೊಳ್ಳಬಾರದು ಎಂದು ಸಚಿವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

### ಸಭೆಯ ಸ್ವಾರಸ್ಯಗಳು

**1991ಕ್ಕೂ ಮುನ್ನ ಭೂಮಿ ಮಂಜೂರಾದವರಿಗೆ ಭಯ ಬೇಡ**

1991ಕ್ಕಿಂತ ಮುನ್ನ ಮಂಜೂರಾದ ಜಮೀನುಗಳಿಗೆ ಡೀಮ್ಡ್ ಅರಣ್ಯ ಎಂಬ ಕಾರಣ ನೀಡಿ ಖಾತೆ ಮಾಡುತ್ತಿಲ್ಲ ಎಂಬ ಮನವಿಗೆ ಪ್ರತಿಕ್ರಿಯಿಸಿದ ಸಚಿವರು, 1991ಕ್ಕೂ ಮುನ್ನ ಡೀಮ್ಡ್ ಅರಣ್ಯ ಎಂಬ ಕಲ್ಪನೆ ಇರಲಿಲ್ಲ. ಆದ್ದರಿಂದ ಆ ಅವಧಿಯ ಭೂಮಿಗಳಿಗೆ ಯಾವುದೇ ಆತಂಕ ಬೇಡ. ಈ ಕುರಿತು ಎಲ್ಲಾ ತಹಸೀಲ್ದಾರರಿಗೆ ಸೂಚನೆ ನೀಡಲಾಗುವುದು ಎಂದರು.




### ಶಾಸಕ ಸಿಮೆಂಟ್ ಮಂಜು ಹೀಗಂದ್ರು..

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಸಿಮೆಂಟ್ ಮಂಜು, ಸಕಲೇಶಪುರ ಮಲೆನಾಡು ಪ್ರದೇಶವಾಗಿದ್ದು, ಆಲೂರು ಬಯಲುಸೀಮೆಯ ಭಾಗವಾಗಿರುವುದರಿಂದ ಇಲ್ಲಿ ಸಮಸ್ಯೆಗಳು ವಿಭಿನ್ನವಾಗಿವೆ. ಈ ಭಾಗದ ಕಂದಾಯ ಸಮಸ್ಯೆಗಳ ಕುರಿತು ಸಚಿವರಿಗೆ ಸಂಪೂರ್ಣ ಅರಿವಿದೆ. ಕಂದಾಯ ಇಲಾಖೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಿರುವ ಕಾರಣ ಜನಸ್ಪಂದನಾ ಕಾರ್ಯಕ್ರಮ ನಡೆಸುವಂತೆ ಮನವಿ ಸಲ್ಲಿಸಲಾಗಿತ್ತು. ತಕ್ಷಣವೇ ಸಚಿವರು ಸ್ಪಂದಿಸಿರುವುದು ಸಂತಸದ ವಿಷಯ. ಇಂದಿನ ದಿನದಲ್ಲಿ ಬಗೆಹರಿಯದ ಸಮಸ್ಯೆಗಳನ್ನೂ ಮುಂದಿನ ದಿನಗಳಲ್ಲಿ ಪರಿಹರಿಸಲಾಗುವುದು. ಅಪಾರ ಸಂಖ್ಯೆಯ ಸಾರ್ವಜನಿಕರು ಭಾಗವಹಿಸಿರುವುದು ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿ ಎಂದು ಹೇಳಿದರು.

**ನಿಯಮಬದ್ಧ ಹೋಂಸ್ಟೇಗಳಿಗೆ ಪರವಾನಗಿ ನೀಡಿ**


ನಿಯಮಾನುಸಾರ ಕಾರ್ಯನಿರ್ವಹಿಸುವ ಹೋಂಸ್ಟೇಗಳಿಗೆ ಪರವಾನಗಿ ನೀಡದೇ ಕಾನೂನುಬಾಹಿರವಾಗಿ ನಡೆಸಲು ಅವಕಾಶ ಮಾಡಿಕೊಡಬೇಡಿ ಎಂದು ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗೆ ಸಚಿವರು ಸೂಚಿಸಿದರು.

### 1110ಕ್ಕೂ ಅಧಿಕ ಅರ್ಜಿಗಳ ಸಲ್ಲಿಕೆ

ಸಭೆಯಲ್ಲಿ 1110ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ ಬಹುತೇಕವು ಕಂದಾಯ ಇಲಾಖೆ ಸಂಬಂಧಿಸಿದವುಗಳಾಗಿದ್ದವು. ಮಧ್ಯಾಹ್ನ 12 ಗಂಟೆಗೆ ಆರಂಭವಾದ ಸಭೆ ಯಾವುದೇ ವಿರಾಮವಿಲ್ಲದೆ ಸಂಜೆ 7.30ರವರೆಗೆ ಮುಂದುವರಿಯಿತು. ವೇದಿಕೆಯಲ್ಲಿ ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಲಘು ಉಪಹಾರ ಸೇವಿಸಿದರು.

ಬೆಳಿಗ್ಗೆ 8.30ರಿಂದಲೇ ಸಾರ್ವಜನಿಕರು ಅರ್ಜಿ ಸಲ್ಲಿಸಲು ಆಗಮಿಸಿದ್ದರು. ಅರ್ಜಿ ಸ್ವೀಕಾರಕ್ಕಾಗಿ ಮಿನಿ ವಿಧಾನಸೌಧದ ಮುಂಭಾಗ ವಿವಿಧ ಇಲಾಖೆಗಳ ಕೌಂಟರ್‌ಗಳನ್ನು ತೆರೆಯಲಾಗಿತ್ತು.

ಸಾರ್ವಜನಿಕರಿಗೆ ಮಿನಿ ವಿಧಾನಸೌಧದ ಮುಂಭಾಗ ಊಟದ ವ್ಯವಸ್ಥೆ ಮಾಡಲಾಗಿದ್ದು, ಸರ್ಕಾರಿ ಸಿಬ್ಬಂದಿಗೆ ಪುರಸಭೆಯಲ್ಲಿ ಊಟ ವ್ಯವಸ್ಥೆ ಮಾಡಲಾಗಿತ್ತು. ಸಾರ್ವಜನಿಕರು ಅಲ್ಲಿ ಸಹ ಆಗಮಿಸಿದ್ದರಿಂದ ಕೆಲ ಸಿಬ್ಬಂದಿಗೆ ಊಟ ದೊರಕದ ಸ್ಥಿತಿ ಉಂಟಾಯಿತು.



**ಆರ್‌ಆರ್‌ಟಿ ಕಡತಗಳ ವಿಲೇವಾರಿಗೆ ತಾಕೀತು**

ಅತಿ ಹೆಚ್ಚು ಆರ್‌ಆರ್‌ಟಿ ಕಡತಗಳು ಬಾಕಿ ಉಳಿದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಚನ್ನರಾಯಪಟ್ಟಣದಲ್ಲಿ ನಡೆದ ಸಭೆಯಲ್ಲೇ ಕಡತ ವಿಲೇವಾರಿಗೆ ಸೂಚಿಸಿದ್ದರೂ ಇನ್ನೂ ನಿರ್ಲಕ್ಷ್ಯ ವಹಿಸಿರುವುದು ಅಸಹ್ಯಕರ ಎಂದರು. ತಕ್ಷಣ ಕಡತ ವಿಲೇವಾರಿ ಮಾಡಬೇಕು ಎಂದು ತಾಲೂಕು ಶಿರಸ್ತೇದಾರ್ ರವಿಕುಮಾರ್ ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**94ಸಿ ಅರ್ಜಿಗೆ ಹಕ್ಕುಪತ್ರ ನೀಡಿ**

94ಸಿ ಅರ್ಜಿಗೆ ಹುಲ್ಲಬನ್ನಿ ಖರಾಬುಟ ಎಂಬ ಕಾರಣ ನೀಡಿ ಹಕ್ಕುಪತ್ರ ನೀಡುತ್ತಿಲ್ಲ ಎಂಬ ದೂರಿಗೆ ಪ್ರತಿಕ್ರಿಯಿಸಿದ ಸಚಿವರು, ಹುಲ್ಲಬನ್ನಿ ಖರಾಬು ಜಮೀನಿಗೂ ಹಕ್ಕುಪತ್ರ ನೀಡುವಂತೆ ತಹಸೀಲ್ದಾರ್‌ಗೆ ನಿರ್ದೇಶನ ನೀಡಿದರು.

**ನಲ್ಲುಳ್ಳಿ ಗ್ರಾಮದ ಪ್ರಕರಣ**

ಜಮೀನು ಹಂಚಿಕೆಗೆ ಸಹೋದರರು ಅಸಹಕಾರ ತೋರುತ್ತಿದ್ದಾರೆ ಎಂಬ ಮನವಿಗೆ, ಅಣ್ಣ-ತಮ್ಮಂದಿರ ವೈಯಕ್ತಿಕ ವಿವಾದಗಳನ್ನು ಬಗೆಹರಿಸುವುದು ಸರ್ಕಾರದ ಕೆಲಸವಲ್ಲ ಎಂದು ಸಚಿವರು ಖಾರವಾಗಿ ಪ್ರತಿಕ್ರಿಯಿಸಿದರು.

**ಟೋಕನ್ ಇಲ್ಲದೆ ವೇದಿಕೆಗೆ ಬಂದ ವ್ಯಕ್ತಿಗೆ ತರಾಟೆ**

ಅರ್ಜಿ ಸಲ್ಲಿಸಿ ಟೋಕನ್ ಪಡೆಯದೆ ವೇದಿಕೆ ಏರಲು ಯತ್ನಿಸಿದ ವ್ಯಕ್ತಿಯನ್ನು ಸಚಿವರು ತರಾಟೆಗೆ ತೆಗೆದುಕೊಂಡು, ಮೊದಲು ಟೋಕನ್ ಪಡೆದು ಬರುವಂತೆ ಸೂಚಿಸಿದರು.

**ನಕ್ಷೆಯಲ್ಲಿ ದಾರಿ ಇದ್ದರೂ ರಸ್ತೆ ಮಾಡಿಲ್ಲ**

ನಕ್ಷೆಯಲ್ಲಿ ದಾರಿ ಇದ್ದರೂ ರಸ್ತೆ ನಿರ್ಮಾಣ ಮಾಡುತ್ತಿಲ್ಲ ಎಂಬ ದೂರಿಗೆ, ಕಾನೂನಿನಲ್ಲಿ ಅಡಕವಾಗಿರುವ ಕೆಲಸವನ್ನು ಮಾಡದೇ ಇದ್ದರೆ ನಾವು ಸಾರ್ವಜನಿಕರ ಮುಂದೆ ತಲೆತಗ್ಗಿಸಬೇಕಾಗುತ್ತದೆ ಎಂದು ತಹಸೀಲ್ದಾರ್ ಸುಪ್ರೀತಾ ಅವರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸಂಸದ ಶ್ರೇಯಸ್ ಪಟೇಲ್, ಅರಸಿಕೇರೆ ಶಾಸಕ ಶಿವಲಿಂಗೇಗೌಡ, ಮಾಜಿ ವಿಧಾನಪರಿಷತ್ ಸದಸ್ಯ ಗೋಪಾಲಸ್ವಾಮಿ, ಜಿಲ್ಲಾಧಿಕಾರಿ ಲತಾಕುಮಾರಿ, ತಾಲೂಕು ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮುರುಳಿಮೋಹನ್, ಉಪವಿಭಾಗಾಧಿಕಾರಿ ಡಾ. ಮಂಜುನಾಥ್, ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

---

# ನೂತನ ಆರೋಗ್ಯ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ನುಗ್ಗೇಹಳ್ಳಿ : ಆರೋಗ್ಯ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಟಾಫ್ ನರ್ಸ್ ಸೇರಿದಂತೆ ವಿವಿಧ ಸಿಬ್ಬಂದಿಗಳಿಗೆ ಕಳೆದ 5 ತಿಂಗಳಿಂದ ಆರೋಗ್ಯ ಇಲಾಖೆಯಿಂದ ವೇತನ ಬಿಡುಗಡೆಯಾಗದೆ ನೌಕರರು ಸಂಕಷ್ಟದಲ್ಲಿದ್ದು ಈ ಬಗ್ಗೆ ಆರೋಗ್ಯ ಸಚಿವರು ಹಾಗೂ ಇಲಾಖೆಯ ಮುಖ್ಯ ಕಾರ್ಯದರ್ಶಿಗಳು ಮಾನವೀಯತೆಯ ದೃಷ್ಟಿಯಿಂದ ಶೀಘ್ರ ಗಮನಹರಿಸುವಂತೆ ಶಾಸಕ ಸಿಎನ್ ಬಾಲಕೃಷ್ಣ ಒತ್ತಾಯ ಮಾಡಿದರು.

ಹೋಬಳಿಯ ಹೊನ್ನಮಾರನಹಳ್ಳಿ ಗ್ರಾಮದಲ್ಲಿ ಆರೋಗ್ಯ ಇಲಾಖೆಯ ಆಯುಷ್ಮಾನ್ ಸ್ವಾಸ್ಥ್ಯ ಯೋಜನೆ ವತಿಯಿಂದ ಸುಮಾರು 65 ಲಕ್ಷ ವೆಚ್ಚದಲ್ಲಿ ನೂತನ ಆರೋಗ್ಯ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಆರೋಗ್ಯ ಇಲಾಖೆಯಲ್ಲಿ ಸ್ಟಾಫ್ ನರ್ಸ್ ಸೇರಿದಂತೆ ವಿವಿಧ ಸಿಬ್ಬಂದಿಗಳಿಗೆ ಕಳೆದ 5 ತಿಂಗಳಿಂದ ಸಂಬಳವಾಗದೆ ಸಿಬ್ಬಂದಿಗಳು ತೀವ್ರ ಸಂಕಷ್ಟದಲ್ಲಿದ್ದು ಇದರಿಂದ ಅವರ ಕುಟುಂಬಗಳ ನಿರ್ವಹಣೆಗೆ ಸಮಸ್ಯೆಯಾಗಿದೆ ಈ ಬಗ್ಗೆ ಇದೇ ತಿಂಗಳು 27ರಿಂದ ನಡೆಯುವ ವಿಶೇಷ ಅಧಿವೇಶನದಲ್ಲಿ ಈ ಸಮಸ್ಯೆಯ ಕುರಿತು ವಿಚಾರ ಪ್ರಸ್ತಾಪಿಸುವುದಾಗಿ ತಿಳಿಸಿದವರು ಅವರು ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳಿಗೆ ಸಮಸ್ಯೆಯ ಕುರಿತು ಮನವರಿಕೆ ಮಾಡಿಕೊಡುವುದಾಗಿ ಹೇಳಿದರು.

ಕೇಂದ್ರ ಸರ್ಕಾರದ 15ನೇ ಹಣಕಾಸಿನ ಯೋಜನೆ ಮೂಲಕ ಆರೋಗ್ಯ ಇಲಾಖೆಯ ಆಯುಷ್ಮಾನ್ ಸ್ವಾಸ್ಥ್ಯ ಯೋಜನೆ ವತಿಯಿಂದ ಸುಮಾರು 40 ಹೊಸ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿದ್ದು ಪ್ರಾಯೋಗಿಕವಾಗಿ ಹೊನ್ನಮಾರನಹಳ್ಳಿ ಗ್ರಾಮದಲ್ಲಿ ಯೋಜನೆಗೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದರು.

ನೂತನ ಆರೋಗ್ಯ ಕಟ್ಟಡ ನಿರ್ಮಾಣದಿಂದ ಗ್ರಾಮಸ್ಥರಿಗೆ ಉತ್ತಮ ಆರೋಗ್ಯ ಸೇವೆ ಲಭಿಸಲಿದೆ ಹೋಬಳಿ ಕೇಂದ್ರದಲ್ಲಿ ಜನರಿಗೆ ಉತ್ತಮ ಆರೋಗ್ಯ ಕಲ್ಪಿಸುವ ದೃಷ್ಟಿಯಿಂದ ಸುಮಾರು 5 ಕೋಟಿ ವೆಚ್ಚದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣ ಮಾಡಲಾಗಿದೆ ಜೊತೆಗೆ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಆರೋಗ್ಯ ಇಲಾಖೆಯ ಕೆಲವು ಆದೇಶಗಳಿಂದ ತಜ್ಞ ವೈದ್ಯರುಗಳನ್ನು ಹೋಬಳಿ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಉಳಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಗಮನ ಹರಿಸುವಂತೆ ಒತ್ತಾಯ ಮಾಡಿದರು.

ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಸಮುದಾಯ ಭವನ ನಿರ್ಮಾಣಕ್ಕೆ ಏಪ್ರಿಲ್ ನಂತರ ಅನುದಾನ ನೀಡಲಾಗುತ್ತದೆ ಜೊತೆಗೆ ಗ್ರಾಮದ ಮುಖ್ಯ ರಸ್ತೆಯ ಅಭಿವೃದ್ಧಿಗೆ 500 ಮೀಟರ್ ಕಾಂಕ್ರೀಟ್ ರಸ್ತೆ ಆದ್ಯತೆ ಜೊತೆಗೆ ಈಗಾಗಲೇ ಗ್ರಾಮದಲ್ಲಿ ಶೇಕಡ 75ರಷ್ಟು ವಿವಿಧ ಬಡಾವಣೆಗಳ ರಸ್ತೆ ಅಭಿವೃದ್ಧಿಗೆ ಹೆಚ್ಚು ಗಮನ ಹರಿಸುವ ಮೂಲಕ ಅಭಿವೃದ್ಧಿಪಡಿಸಲಾಗಿದೆ ಎಂದರು.

ಎಪಿಎಂಸಿ ಮಾಜಿ ಅಧ್ಯಕ್ಷ ದೊರೆಸ್ವಾಮಿ, ಟಿ ಎ ಪಿ ಎಂ ಎಸ್ ನಿರ್ದೇಶಕ ತೋಟಿ ನಾಗರಾಜ್, ಗ್ರಾಮ ಪಂಚಾಯಿತಿ ಅಧ್ಯಕ್ಷ ನಟರಾಜ್ ಯಾದವ್, ಕೃಷಿ ಪತ್ತಿನ ಮಾಜಿ ಅಧ್ಯಕ್ಷ ಎಚ್ ಬಿ ರಂಗಸ್ವಾಮಿ, ಮಾಜಿ ಅಧ್ಯಕ್ಷರುಗಳಾದ ವಿಠಲ್ ಕುಮಾರ್, ಎನ್ ಆರ್ ಶಿವಕುಮಾರ್, ಹೊನ್ನೇಗೌಡ, ಎನ್ ಎಸ್ ಮಂಜುನಾಥ್, ಕೃಷಿ ಪತ್ತಿನ ನಿರ್ದೇಶಕ ಪಟೇಲ್ ಕುಮಾರ್, ವೈದ್ಯಾಧಿಕಾರಿ ಡಾ. ಪ್ರವೀಣ್, ಮುಖಂಡರಾದ ಬೋರೇಗೌಡ, ಶೇಖರ್, ರಾಜೇಗೌಡ, ಜಯರಾಮ್, ಮಾಸ್ತಿಗೌಡ, ಪೋಲಿಸ್ ನಾರಾಯಣಗೌಡ, ಚಂದ್ರು, ಸುಹಿಲ್, ಗುತ್ತಿಗೆದಾರರಾದ ಸಂದೀಪ್, ಮನೋಜ್, ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

---

# ಡಿವೈಎಸ್‌ಪಿ ನೇತೃತ್ವದಲ್ಲಿ ಕಾಫಿ ಬೆಳೆಗಾರರ ಸಂಘ-ಪೊಲೀಸ್ ಇಲಾಖೆ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಬೆಳೆಗಾರರ ವಿವಿಧ ಸಮಸ್ಯೆಗಳ ಕುರಿತು ಪೊಲೀಸ್ ಇಲಾಖೆ ಹಾಗೂ ಕಾಫಿ ಬೆಳೆಗಾರರ ಸಂಘಟನೆಗಳ ಸಂಯುಕ್ತ ಸಭೆ ಗುರುವಾರ ನಡೆಯಿತು.

ತಾಲ್ಲೂಕಿನ ಬಾಳ್ಳುಪೇಟೆಯಲ್ಲಿರುವ ಬೆಳಗೋಡು ಹೋಬಳಿ ಕಾಫಿ ಬೆಳೆಗಾರರ ಸಂಘದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಬೆಳೆಗಾರರು ತಮ್ಮ ಸಮಸ್ಯೆಗಳ ಕುರಿತು ಪೊಲೀಸ್ ಅಧಿಕಾರಿಗಳ ಗಮನ ಸೆಳೆದರು. ಈ ಸಂದರ್ಭದಲ್ಲಿ ಮಾತನಾಡಿದ ಕೃಷಿಕ ಹಾಗೂ ಹೋರಾಟಗಾರ ಯಡೆಹಳ್ಳಿ ಮಂಜುನಾಥ್, ಬೆಳೆಗಾರರಿಗೆ ಕಾಡಾನೆ ಹಾವಳಿ ತೀವ್ರವಾಗಿದ್ದು, ಕಾಡಾನೆ ದಾಳಿಯಿಂದ ಸಂಕಷ್ಟದಲ್ಲಿರುವ ರೈತರ ಪರವಾಗಿ ಪ್ರತಿಭಟನೆ ನಡೆಸಿದಾಗ ಪೊಲೀಸರು ವಿನಾಕಾರಣ ಹಾಗೂ ದುರುದ್ದೇಶಪೂರಿತವಾಗಿ ಪ್ರಕರಣ ದಾಖಲಿಸುತ್ತಿರುವುದು ಖಂಡನೀಯ ಎಂದು ಆರೋಪಿಸಿದರು.

ಅರ್ಜುನ ಆನೆ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿ ಅದರ ಪರವಾಗಿ ನಡೆದ ಪ್ರತಿಭಟನೆಯ ಕಾರಣದಿಂದ ಎರಡು ವರ್ಷಗಳ ಬಳಿಕ ಹೋರಾಟಗಾರರ ಮೇಲೆ ಪ್ರಕರಣ ದಾಖಲಿಸಿರುವುದು ಹೋರಾಟ ಮನೋಭಾವವನ್ನು ಕುಗ್ಗಿಸುವ ಕ್ರಮವಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಈ ರೀತಿಯ ಸುಳ್ಳು ಪ್ರಕರಣಗಳನ್ನು ದಾಖಲಿಸುವುದನ್ನು ಪೊಲೀಸ್ ಇಲಾಖೆ ಕೈಬಿಡಬೇಕೆಂದು ಒತ್ತಾಯಿಸಿದರು.

ಜೊತೆಗೆ ಮಲೆನಾಡು ಪ್ರದೇಶದಲ್ಲಿ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚಾಗಿದ್ದು, ಅವರಿಂದ ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಪೂರೈಕೆ ನಡೆಯುತ್ತಿದೆ. ಇದನ್ನು ತಡೆಗಟ್ಟಲು ಅಕ್ರಮ ವಲಸಿಗರನ್ನು ಗುರುತಿಸಿ ಅವರ ದೇಶಗಳಿಗೆ ವಾಪಸ್ ಕಳುಹಿಸಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಡಿವೈಎಸ್‌ಪಿ ಮಾಲತೇಶ್, ತಮ್ಮ ವೃತ್ತಿ ಜೀವನದಲ್ಲಿ ವಿವಿಧ ರೀತಿಯ ಪ್ರಕರಣಗಳನ್ನು ಭೇದಿಸಿದ ಅನುಭವವಿದ್ದು, ಹೋರಾಟಗಾರರ ವಿರುದ್ಧ ವಿನಾಕಾರಣ ಸುಳ್ಳು ಪ್ರಕರಣ ದಾಖಲಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು. ಜನರ ಸುರಕ್ಷತೆಯೇ ಪೊಲೀಸ್ ಇಲಾಖೆಯ ಮೊದಲ ಆದ್ಯತೆ ಎಂದು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಸೂಚನೆಯಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳಿಂದ ಅನೇಕರು ಪ್ರಾಣ ಕಳೆದುಕೊಳ್ಳುತ್ತಿರುವ ಬಗ್ಗೆ ಅಂಕಿ-ಅಂಶಗಳೊಂದಿಗೆ ಸಭೆಯ ಗಮನ ಸೆಳೆದರು.




ಪೊಲೀಸ್ ಇಲಾಖೆಯನ್ನು ಮತ್ತಷ್ಟು ಜನಸ್ನೇಹಿಯಾಗಿಸಲು ಹಲವು ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಕಾಫಿ ಬೆಳೆಗಾರರು ತಮ್ಮ ತೋಟಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ರಸ್ತೆ ಸುರಕ್ಷತೆ ಬಗ್ಗೆ ಸಾರ್ವಜನಿಕರು ಹೆಚ್ಚಿನ ಜಾಗೃತಿ ವಹಿಸಬೇಕು ಎಂದು ಮನವಿ ಮಾಡಿದರು. ಗಾಂಜಾ ಸೇವನೆ ಹಾಗೂ ಮಾರಾಟಕ್ಕೆ ಸಂಬಂಧಿಸಿದ ಮಾಹಿತಿ ಲಭ್ಯವಾದಲ್ಲಿ ತಕ್ಷಣ 112ಕ್ಕೆ ಕರೆ ಮಾಡಿ ಮಾಹಿತಿ ನೀಡುವಂತೆ ಹೇಳಿದರು.

ಕಾಡಾನೆ ಹಾವಳಿ ಹಾಗೂ ಇತರೆ ಅಪರಾಧಗಳನ್ನು ತಡೆಗಟ್ಟುವ ಉದ್ದೇಶದಿಂದ ವಿಶೇಷ ಯೋಜನೆ ರೂಪಿಸಲಾಗಿದ್ದು, ಆಯಾಕಟ್ಟಿನ ಹಳ್ಳಿಗಳಲ್ಲಿ ಸ್ಥಳೀಯರು ಮತ್ತು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಅವರು ಸ್ಥಳೀಯವಾಗಿ ವಾಟ್ಸ ಪ್ ಗುಂಪುಗಳನ್ನು ರಚಿಸಿ ಜನರಿಗೆ ಮಾಹಿತಿ ನೀಡಲಿದ್ದಾರೆ.

ಕಳ್ಳತನ ಪ್ರಕರಣಗಳ ಪತ್ತೆಗೆ ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸಲಾಗುತ್ತಿದ್ದು, ಶೀಘ್ರದಲ್ಲೇ ಆರೋಪಿಗಳನ್ನು ಬಂಧಿಸಲಾಗುವುದು ಎಂದು ಡಿವೈಎಸ್‌ಪಿ ತಿಳಿಸಿದರು.

ಸಭೆಯಲ್ಲಿ ಬೆಳಗೋಡು ಹೋಬಳಿ ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ರಾಮಕೃಷ್ಣ, ವೃತ್ತ ನಿರೀಕ್ಷಕ ಪಾಟೀಲ್, ಪಿಎಸ್‌ಐ ಪ್ರಸನ್ನ, ಸಂಘದ ಕಾರ್ಯದರ್ಶಿ ಹೆಗ್ಗೋವೇ ಪುಟ್ಟರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

# ಜ.29ರಿಂದ ಫೆ.1ರವರೆಗೆ ವೀರಶೈವ ಲಿಂಗಾಯಿತ ಗ್ಲೋಬಲ್ ಬಿಸಿನೆಸ್ ಬೃಹತ್ ಸಮಾವೇಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ವೀರಶೈವ ಲಿಂಗಾಯಿತ ಯುವ ಸಮುದಾಯವನ್ನು ಆರ್ಥಿಕವಾಗಿ ಸಬಲಗೊಳಿಸುವ ಉದ್ದೇಶದಿಂದ ವೀರಶೈವ?ಲಿಂಗಾಯಿತ ಗ್ಲೋಬಲ್ ಬಿಸಿನೆಸ್ ಕಾಂಕ್ಲೇವ್ ಅನ್ನು ಜನವರಿ 29ರಿಂದ ಫೆಬ್ರವರಿ 1ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿರುವ ವೈಟ್ ಪೆಟಲ್ಸ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಅಂತರಾಷ್ಟ್ರೀಯ ಲಿಂಗಾಯಿತ ಯುವ ವೇದಿಕೆ ತಿಳಿಸಿದೆ.

ಈ ಕುರಿತು ನಗರದ ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿ ನಡೆಸಲಾಗಿದ್ದು, ಅಂತರಾಷ್ಟ್ರೀಯ ಲಿಂಗಾಯಿತ ಯುವ ವೇದಿಕೆಯ ಸಂತೋಷ್ ಕೆಂಚಾಂಬರ್, ಟ್ರಸ್ಟಿ ಸತೀಶ್ ಮೂಡಿ, ಸಂಸ್ಥಾಪಕ ಸದಸ್ಯರಾದ ವಿದ್ಯಾ ಪಟೇಲ್, ಶಿವಕುಮಾರ್ ಸರಶೆಟ್ಟಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಿನಯ್ ಮಹದೇವಸ್ವಾಮಿ ಹಾಗೂ ಬೆಂಗಳೂರು ನಗರ ಅಧ್ಯಕ್ಷ ಪ್ರತಾಪ್ ಆರಾಧ್ಯ ಉಪಸ್ಥಿತರಿದ್ದರು.

ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸಂತೋಷ್ ಕೆಂಚಾಂಬರ್ ಅವರು, ವೀರಶೈವ, ಲಿಂಗಾಯಿತ ಯುವಕರು ಸ್ವಾವಲಂಭಿ ಹಾಗೂ ಸ್ವಾಭಿಮಾನಿಯಾಗಿ ಬದುಕಬೇಕಾದರೆ ಸಂಘಟಿತರಾಗಬೇಕು. ಈ ಕಾರಣದಿಂದಲೇ ಗ್ಲೋಬಲ್ ಬಿಸಿನೆಸ್ ಕಾಂಕ್ಲೇವ್ ಆಯೋಜಿಸಲಾಗಿದೆ ಎಂದು ಹೇಳಿದರು.

---

# ಅಪ್ರಾಪ್ತರು ವಾಹನ ಚಾಲನೆ ಮಾಡದಿರಿ : ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ರಸ್ತೆ ಸುರಕ್ಷತೆ ಚಾಲನಾ ನಿಯಮಗಳನ್ನು ಯಾರು ಸಹ ಉಲ್ಲಂಘಿಸಬಾರದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಹಳೇ ಬಸ್ ನಿಲ್ದಾಣದಲ್ಲಿ ಎ.ಆರ್.ಟಿ.ಓ ವತಿಯಿಂದ ಆಯೋಜಿಸಲಾಗಿದ್ದ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ ಅಂಗವಾಗಿ ಬೀದಿ ನಾಟಕಗಳ ಮೂಲಕ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ದೇಶ ಹಾಗೂ ರಾಜ್ಯದಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಅದರಲ್ಲು ಯುವ ಜನಾಂಗ ವಾಹನಗಳನ್ನು ಸರಿಯಾದ ರೀತಿಯಲ್ಲಿ ಚಾಲನೆ ಮಾಡದೆ ಅಪಘಾತಕ್ಕೀಡಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಜಾಗೃತಿ ಹೊಂದಬೇಕು. ಪೋಷಕರು ಅಪ್ರಾಪ್ತ ಮಕ್ಕಳಿಗೆ ವಾಹನಗಳನ್ನು ಚಾಲನೆ ಮಾಡಲು ನೀಡಬಾರದು. ಮಕ್ಕಳಿಗೆ 18 ವರ್ಷ ವಯಸ್ಸು ತುಂಬಿದ ನಂತರ ಚಾಲನಾ ಪರವಾನಾಗಿ ಮಾಡಿಸಿ ವಾಹನಗಳ ಚಾಲನೆ ಕುರಿತು ಸಂಪೂರ್ಣವಾಗಿ ಅರಿವು ಹೊಂದಿದ ನಂತರ ವಾಹನಗಳನ್ನು ಚಲಾಯಿಸಲು ಮುಂದಾಗಬೇಕು. ಪ್ರತಿಯೊಂದು ಜೀವವು ಅಮೂಲ್ಯವಾಗಿದ್ದು ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ರಸ್ತೆ ಸುರಕ್ಷತಾ ನಿಯಮಗಳನ್ನು ಅರಿತು ವಾಹನಗಳನ್ನು ಚಾಲನೆ ಮಾಡಬೇಕು ಹಾಗೂ ಮುಂದಿನ ದಿನಗಳಲ್ಲಿ ಆಟೋ, ಟ್ಯಾಕ್ಸಿ , ಲಾರಿ ಚಾಲಕರಿಗೆ ಈ ರೀತಿಯ ಜಾಗೃತಿ ಕಾರ್ಯಕ್ರಮವನ್ನು ಇಲಾಖೆ ವತಿಯಿಂದ ಆಯೋಜಿಸಬೇಕು ಎಂದರು.

ಎ.ಆರ್.ಟಿ.ಓ ಕಚೇರಿಯ ಮುಖ್ಯ ಅಧೀಕ್ಷಕ ಗಿರೀಶ್ ಮಾತನಾಡಿ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ ಅಂಗವಾಗಿ ಬೀದಿ ನಾಟಕಗಳ ಮೂಲಕ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಇಂದು ಶಾಸಕರಿಂದ ಚಾಲನೆ ನೀಡಲಾಗಿದೆ. ಸಂಚಾರಿ ನಿಯಮಗಳನ್ನು ಎಲ್ಲಾರು ಅನುಸರಿಸಬೇಕು ಹಾಗೂ ಇದರಿಂದ ಮಾತ್ರ ಅಪಘಾತಗಳನ್ನು ತಡೆಯಲು ಸಾಧ್ಯ ಎಂದರು.

ಪಟ್ಟಣದ ಹಳೇ ಬಸ್ ನಿಲ್ದಾಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ ಆಯೋಜಿಸಲಾಗಿದ್ದ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ಮಾತನಾಡಿ

ಈ ಸಂಧರ್ಭದಲ್ಲಿ ಶಾಸಕರು ಖುದ್ದಾಗಿ ದ್ವಿಚಕ್ರ ವಾಹನಗಳ ಚಾಲಕರಿಗೆ ಹಾಗೂ ಆಟೋ ಚಾಲಕರಿಗೆ ಸಂಚಾರ ಸುರಕ್ಷತೆ ಕುರಿತು ಜಾಗೃತಿ ಮೂಡಿಸಿದರು.

ಈ ಸಂಧರ್ಭದಲ್ಲಿ ಎ.ಆರ್ .ಟಿ.ಓ ಸರಸ್ವತಿ, ಆರ್.ಟಿ.ಓ ಕಚೇರಿ ಸಿಬ್ಬಂದಿಗಳಾದ ವೀಣಾ, ಸೋಮಶೇಖರ್, ಬಿಜೆಪಿ ಮುಖಂಡ ಬಾಬಣ್ಣ, ಮುಂತಾದವರು ಹಾಜರಿದ್ದರು.

# ಕಬ್ಬಳಿ ಪುಷ್ಕರಣಿಯಲ್ಲಿ ಚುಂಚಶ್ರೀಗಳ ವೈಭವದ ತೆಪ್ಪೋತ್ಸವ

## ಧನುರ್ಮಾಸ ಪೂಜೆ ಸಂಪನ್ನ : ವ್ರತ ಪೂರ್ಣಗೊಳಿಸಿದ ಬಸವ ಮಾಲಾಧಾರಿಗಳು

**ಆರ್ ಶ್ರೀನಿವಾಸ್ ಉಳ್ಳಾವಳ್ಳಿ**

ಚನ್ನರಾಯಪಟ್ಟಣ: ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀ ಕ್ಷೇತ್ರ ಕಬ್ಬಳಿ ಶ್ರೀ ಬಸವೇಶ್ವರ ಸ್ವಾಮಿ ಸನ್ನಿಧಿಯಲ್ಲಿ ಧನುರ್ಮಾಸ ಸಂಪನ್ನ ಪ್ರಯುಕ್ತ ಬಸವ ಮಾಲಾಧಾರಿಗಳ ಪಡಿಪೂಜೆ ಹಾಗೂ ಚುಂಚಶ್ರೀಗಳ ತೆಪ್ಪೋತ್ಸವವು ಸಾವಿರಾರು ಮಂದಿ ಭಕ್ತರ ಸಮ್ಮುಖದಲ್ಲಿ ಬುಧವಾರ ರಾತ್ರಿ ವಿಜೃಂಭಣೆಯಿಂದ ನಡೆಯಿತು.

ಹಿನ್ನೆಲೆಯಲ್ಲಿ ಶ್ರೀ ಬಸವೇಶ್ವರ ಸ್ವಾಮಿ ಸನ್ನಿಧಿಯನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿದ್ದು ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ಮುಂಜಾನೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳು ಪ್ರಾರಂಭಗೊಂಡವು.

ರಾತ್ರಿ 10.30 ಗಂಟೆಯಲ್ಲಿ ಶ್ರೀ ಕ್ಷೇತ್ರಕ್ಕೆ ಆಗಮಿಸಿದ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರನ್ನು ಭಕ್ತರು ಪಾದಪೂಜೆ ಮಾಡಿ ಸ್ವಾಗತಿಸಿದರು. ಮಂಗಳ ವಾದ್ಯದೊಂದಿಗೆ ಬರಮಾಡಿಕೊಂಡರು.

ಚುಂಚಶ್ರೀಗಳು ಮೊದಲಿಗೆ ಶ್ರೀ ಬಸವೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು. ದೇಗುಲದ ಹಿಂಭಾಗದಲ್ಲಿರುವ ಬಸವ ಮೂರ್ತಿಗೆ ಕ್ಷೀರಾಭಿಷೇಕ ನೆರವೇರಿಸಿದರು. ಶ್ರೀ ಬಾಲಗಂಗಾಧರನಾಥ ಮಹಾ ಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪಣೆ ಮಾಡಿ ಆರತಿ ಬೆಳಗಿಸಿದರು.

ವೈಭವದ ತೆಪ್ಪೋತ್ಸವ: ರಾತ್ರಿ 11.45 ರ ಸುಮಾರಿನಲ್ಲಿ ದೇಗುಲದ ಆವರಣದಲ್ಲಿರುವ ಪುಷ್ಕರಣಿಯಲ್ಲಿ ಚುಂಚಶ್ರೀಗಳ ತೆಪ್ಪೋತ್ಸವ ಜರುಗಿತು. ಶ್ರೀ ಬಸವೇಶ್ವರ ಸ್ವಾಮಿ ಭಾವಚಿತ್ರ, ದಸರಿಘಟ್ಟದ ಶ್ರೀ ಚೌಡೇಶ್ವರಿ ದೇವಿ, ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಪುತ್ಥಳಿ ಪ್ರತಿಷ್ಠಾಪಿಸಿದ್ದು ಪುಷ್ಪ ಸಿಂಹಾಸನದ ಮೇಲೆ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರು ಅಲಂಕೃತರಾದ ಬಳಿಕ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ವಿಶೇಷ



ಪೂಜೆ ಸಲ್ಲಿಸುವ ಮೂಲಕ ತೆಪ್ಪೋತ್ಸವ ಚಾಲನೆ ನೀಡಿದರು. ಭಕ್ತರ ಜಯ ಘೋಷಣೆಯೊಂದಿಗೆ ಪುಷ್ಕರಣಿಯಲ್ಲಿ ಮೂರು ಸುತ್ತು ತೆಪ್ಪೋತ್ಸವದ ಪ್ರದಕ್ಷಣೆ ಸಾಗಿತು.

ತುಮಕೂರು, ಚನ್ನರಾಯಪಟ್ಟಣ, ತಿಪಟೂರು, ನಾಗಮಂಗಲ, ತುರುವೆಕೆರೆ ಮತ್ತು ಅರಸಿಕೆರೆ ತಾಲ್ಲೂಕುಗಳ ವಿವಿಧ ಗ್ರಾಮಗಳಿಂದ ಗ್ರಾಮದೇವತೆಗಳನ್ನು ಮೆರವಣಿಗೆಯಲ್ಲಿ ಕಬ್ಬಳಿ ಗ್ರಾಮಕ್ಕೆ ಕರೆತಂದಿದ್ದರು. ದೇವಸ್ಥಾನದ ಆವರಣದಲ್ಲಿ ಭಕ್ತರು ಭಜನೆ ಮತ್ತು ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ಸಾವಿರಾರು ಬಸವ ಮಾಲಾಧಾರಿಗಳು ತಮ್ಮ ಗ್ರಾಮ ದೇವತೆಗಳೊಂದಿಗೆ ಶ್ರೀ ಕ್ಷೇತ್ರಕ್ಕೆ ಬುಧವಾರ ರಾತ್ರಿ ಮೆರವಣಿಗೆಯಲ್ಲಿ ಆಗಮಿಸಿ ತಮ್ಮ ಧನುರ್ಮಾಸ ವ್ರತವನ್ನು ಸಂಪನ್ನಗೊಳಿಸಿದರು.

ಬಳಿಕ ದೇವಸ್ಥಾನದ ಪಕ್ಕದಲ್ಲಿರುವ ಪುಷ್ಕರಣಿಯಲ್ಲಿ ಭಕ್ತರು ಪುಣ್ಯಸ್ನಾನ ಮಾಡಿದರು. ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ತಾವು ತೊಟ್ಟಿದ್ದ ವಸ್ತ್ರ ಮತ್ತು ಬಸವ ಮಾಲೆಯನ್ನು ತೆಗೆದರು. ರಾಜ್ಯದ ಮೂಲೆ ಮೂಲೆಯಿಂದ ಭಕ್ತರು ಆಗಮಿಸಿದ್ದು ವಿಶೇಷವಾಗಿತ್ತು.

ಅಯ್ಯಪ್ಪಸ್ವಾಮಿಗೆ ಮಾಲೆ ಧರಿಸುವ ಮಾದರಿಯಲ್ಲಿಯೇ ಕಬ್ಬಳಿ ಬಸವೇಶ್ವರ ಸ್ವಾಮಿಗೆ ಸಾವಿರಾರು ಭಕ್ತರು ಧನುರ್ಮಾಸದ ಪ್ರಾರಂಭದಿಂದ ಬಸವಮಾಲೆಯನ್ನು ಧರಿಸಿ ವ್ರತ ಕೈಗೊಂಡಿದ್ದರು. ಈ ಆಚರಣೆಯು ಕಳೆದ 40 ವರ್ಷಗಳಿಂದ ನಡೆಯುತ್ತಿದ್ದೆ. ತಮ್ಮ ಗ್ರಾಮದೇವತೆ ಮತ್ತು ದೇವಸ್ಥಾನದಿಂದ ತೆಗೆದುಕೊಂಡು ಹೋಗಿದ್ದ

> ಸುಮಾರು 15 ವರ್ಷಗಳಿಂದ ಧನುರ್ಮಾಸ ಪೂಜೆಯಲ್ಲಿ ಪಾಲ್ಗೊಂಡು ಮಾಲೆ ಧರಿಸಿ ದೇವರ ಸೇವೆ ಮಾಡುತ್ತಿದ್ದೀನೆ. ಇದರಿಂದ ನನಗೆ ತುಂಬಾ ಒಳ್ಳೆಯದೇ ಹಾಗಿದೆ. ಸಂಕಷ್ಟ ಎಂದು ಇಲ್ಲಿಗೆ ಬರುವ ಭಕ್ತರು ಎಂದಿಗೂ ಬರೀ ಕೈಯಲ್ಲಿ ಹಿಂದಿರುಗಿಲ್ಲ. ಶ್ರೀ ಬಸವೇಶ್ವರ ಸ್ವಾಮಿಯು ಜನ ಜಾನುವಾರುಗಳನ್ನು ಕಾಯುವ ದೈವನಾಗಿದ್ದು ನಂಬಿದ ಭಕ್ತರಿಗೆ ಸುಖ, ಶಾಂತಿ ಹಾಗೂ ನೆಮ್ಮದಿಯನ್ನು ಕರುಣಿಸುತ್ತಾನೆ.
>
> **- ಕೆ.ಎನ್.ಹರಿಪ್ರಸಾದ್, ಭಕ್ತರು. ಕನುವನಘಟ್ಟ.**



ಕಳಸವನ್ನು ವಿವಿಧ ವಾದ್ಯಗಳು, ಕಲಾತಂಡಗಳ ಮೆರವಣಿಗೆಯಲ್ಲಿ ಬುಧವಾರ ರಾತ್ರಿ ಸಾವಿರಾರು ಮಾಲಾಧಾರಿಗಳು ದೇವಸ್ಥಾನದ ಆವರಣವನ್ನು ಸೇರಿದರು.

ಗುರುವಾರ ಮುಂಜಾನೆ ಸುಮಾರನಲ್ಲಿ ಸನ್ನಿಧಿಗೆ ಆಗಮಿಸಿದ್ದ ಎಲ್ಲಾ ಗ್ರಾಮ ದೇವತೆಗಳಿಗೂ ಮಠದ ವತಿಯಿಂದ ಮಡಿಲಕ್ಕಿ ಸೇವೆ ನಡೆಯಿತು.

ಹಾಸನ ಮಠದ ಶಂಭುನಾಥ ಸ್ವಾಮೀಜಿ, ಕಬ್ಬಳಿ ಮಠದ ಶಿವಪುತ್ರನಾಥ ಸ್ವಾಮೀಜಿ ಸೇರಿದಂತೆ ಗ್ರಾಮದ ಮುಖಂಡರು, ವಿವಿಧ ಮಠಗಳ ಸ್ವಾಮೀಜಿಗಳು ಇದ್ದರು.

# ವಿಜೃಂಭಣೆಯ ಬ್ರಹ್ಮ ರಥೋತ್ಸವ

**ಗುರುವಾರ ಸಂಜೆ ಗೋಧೂಳಿ ಸಮಯದಲ್ಲಿ ಭೂ ನೀಲದೊಂದಿಗೆ ರಂಗನಾಥ ಸ್ವಾಮಿಯ ಕಿರು ಕಲ್ಯಾಣೋತ್ಸವನ ಅದ್ದೂರಿಯಿಂದ ಜರುಗಿತು. ಅದರಲ್ಲೂ ಅಪಾರ ಭಕ್ತರು ಪಾಲ್ಗೊಂಡು ಅಪರೂಪದ ದೃಶ್ಯ ಕಣ್ತುಂಬಿಕೊಳ್ಳುವುದರ ಜೊತೆಗೆ ಭಕ್ತಿಯಿಂದ ಭಾಗಿಯಾದರು. ನಂತರ ನೆರೆದಿದ್ದ ಎಲ್ಲ ಭಕ್ತರಿಗೂ ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.**



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲೂಕಿನ ಸುಕ್ಷೇತ್ರ ಗುತ್ತಿನಕೆರೆಗೆ ಗ್ರಾಮದಲ್ಲಿ ನೆಲೆಸಿರುವ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜಗುಗಿತು.

ಜಾತ್ರಾ ಮಹೋತ್ಸವದ 2ನೇ ದಿನವಾದ ಶುಕ್ರವಾರ ಮುಂಜಾನೆಯಿಂದಲೇ ದೇವಾಲಯದ ಸಂಪ್ರದಾಯದಂತೆ, ಪೂಜಾ ಕೈಂಕರ್ಯಗಳು ಆರಂಭವಾದರೆ, ಮಧ್ಯಾಹ್ನ ಹಾರನಹಳ್ಳಿ ಕೋಡಮ್ಮ ದೇವಿ, ಯಳವಾರೆ ಹುಚ್ಚಮ್ಮ ದೇವಿ, ತಳ್ಳೂರು ಬನ್ನಿಕಾಳಮ್ಮ ದೇವಿ, ಹುಲ್ಲೇಕೆರೆ ಗ್ರಾಮದೇವತೆ ಸೇರಿದಂತೆ ಸುತ್ತಮುತ್ತಲ ಗ್ರಾಮ ದೇವತೆಗಳ ಸಮ್ಮುಖದಲ್ಲಿ ಅಲಂಕೃತ ಬ್ರಹ್ಮ ರಥೋತ್ಸವ ಜರುಗಿತು.

ರಥೋತ್ಸವಕ್ಕೂ ಮುನ್ನ, ಗ್ರಾಮದ ತಿಮ್ಮಪ್ಪ ದೇವಾಲಯಗದಿಂದ ಭೂ ನೀಲ ಸಮೇತನಾದ ರಂಗನಾಥಸ್ವಾಮಿಯ ಉತ್ಸವ ಮೂರ್ತಿಯನ್ನು ಕರ್ಪೂರ ಸೇವೆಯೊಂದಿಗೆ ದಾರಿಯುದ್ದಕ್ಕೂ ಪುಷ್ಪ ವೃಷ್ಟಿಗರೆಯುತ್ತಾ ರಥದ ಮಂಟಪಕ್ಕೆ ತಂದು ಪ್ರತಿಷ್ಠಾಪಿಸಲಾಯಿತು. ಬಳಿಕ ಬ್ರಹ್ಮ ರಥೋತ್ಸವಕ್ಕೆ ಚಾಲನೆ ದೊರೆಯಿತು.

ಈ ಶುಭ ಘಳಿಗೆಗಾಗಿ ಕಾಯುತ್ತಿದ್ದ ಸಹಸ್ರಾರು ಭಕ್ತರು, ಮಹಾ ಮಂಗಳಾರತಿ ಬೆಳಗುತ್ತಿದ್ದಂತೆಯೇ ಗೋವಿಂದನ ನಾಮ ಸ್ಮರಣೆಯೊಂದಿಗೆ ರಥ ಎಳೆದು ಪುನೀತರಾದರು.

ನಾಳೆ ಮಧ್ಯಾಹ್ನ 1.30 ರಂಗನಾಥ ಸ್ವಾಮಿಯ ದೊಡ್ಡ ರಥೋತ್ಸವ ನಡೆಯಲಿದ್ದು, ಇದಕ್ಕಾಗಿ ದೇವಾಲಯ ಸಮಿತಿ, ಸ್ಥಳೀಯ ಆಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಈ ದೃಶ್ಯಕ್ಕೆ ಸಾಕ್ಷಿಯಾಗಲು ಅಪಾರ ಮಂದಿ ಕಾಯುತ್ತಿದ್ದಾರೆ.

ರಥೋತ್ಸವ ಸಂದರ್ಭದಲ್ಲಿ ಮುಜರಾಯಿ ಸೇರಿದಂತೆ ನಾನಾ ಇಲಾಖೆ ಅಧಿಕಾರಿಗಳು ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು ದೇವಾಲಯ ಅಭಿವೃದ್ಧಿ ಸಮಿತಿ ಸದಸ್ಯರು ಹಾಜರಿದ್ದರು.

# ಒತ್ತುವರಿ ತೆರವಿಗೆ ನಿರ್ಲಕ್ಷ್ಯ ಆರೋಪ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲೂಕಿನ ಮಲ್ಲಗೋಡನಹಳ್ಳಿ ಗ್ರಾಮದಲ್ಲಿ ಸುಮಾರು 65 ಎಕರೆ ಸರ್ಕಾರಿ ಜಾಗವನ್ನು ಸ್ಥಳೀಯರೇ ಒತ್ತುವರಿ ಮಾಡಿದ್ದಾರೆ ಎಂದು

ಗ್ರಾಮದ ಸ್ವಾಮಿ ಎಂಬುವರು ಗಂಭೀರ ಆರೋಪ ಮಾಡಿದರು.

ಕೆರೆ ಆವರಣ, ನೆಡುತೋಪು, ಜಮೀನು, ಗೋಮಾಳ ಒತ್ತುವರಿ ಮಾಡಿ, ತೋಟ, ಮನೆ ನಿರ್ಮಾಣ ಮಾಡಿದ್ದಾರೆ.ದಬ್ಬಾಳಿಕೆ ಮೂಲಕ ಅಕ್ರಮವಾಗಿ ಒತ್ತುವರಿ ಮಾಡಲಾಗಿದೆ. ಕೂಡಲೇ ಇದನ್ನು ತೆರವುಗೊಳಿಸಬೇಕು ಎಂದು ಆಗ್ರಹಿಸಿದರು.

ಗ್ರಾಮದ ಸರ್ವೆ ನಂಬರ್ 13 ರಲ್ಲಿ ಬಿದರಕಟ್ಟೆ ಸರ್ಕಾರಿ ಜಮೀನು 21.09 ಗುಂಟೆ ಇದ್ದು, ಇದರಲ್ಲಿ ರುದ್ರಭೂಮಿಗಾಗಿ 2 ಎಕರೆ ಜಾಗ ಮೀಸಲಾಗಿದೆ. ಇದೇ ರೀತಿ 1.34 ಗುಂಟೆ ಸರ್ಕಾರಿ ಕೆರೆ ಹಾಗೂ ಸರ್ವೆ ನಂ.17ರಲ್ಲಿ 3.19 ಗುಂಟೆ ಸರ್ಕಾರಿ ತೋಪು ಜಮೀನು ಸರ್ಕಾರದ ಸ್ವತ್ತಾಗಿವೆ. ಆದರೆ ಇಷ್ಟೂ ಜಮೀನನ್ನು ಕೆಲವರು ಅಕ್ರಮವಾಗಿ ವಶಪಡಿಸಿಕೊಂಡಿದ್ದಾರೆ. ಇದಕ್ಕೆ ರಾಜಕೀಯ ಪ್ರಭಾವವೂ ಇದೆ ಎಂದು ದೂರಿದರು.

ಈ ಸಂಬಂಧ ಡಿಸಿ, ಎಸಿ, ತಹಸೀಲ್ದಾರ್, ಉಪ ತಹಸೀಲ್ದಾರ್ ಸೇರಿ ಅನೇಕ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದು ಅಳಲು ತೋಡಿಕೊಂಡರು.

ಅಷ್ಟೇ ಅಲ್ಲದೆ, ಕಂದಾಯ ಸಚಿವರು, ಸಿಎಂ ಜೊತೆಗೆ ಕರ್ನಾಟಕ ಲೋಕಾಯುಕ್ತರಿಗೂ ದೂರು ನೀಡಲಾಗಿದೆ. ಅವರು ಕೂಡಲೇ ಸರ್ಕಾರಿ ಒತ್ತುವರಿಯನ್ನು ತೆರವು ಮಾಡಿ, ಆ ಬಗ್ಗೆ ವರದಿ ನೀಡುವಂತೆ ಸೂಚಿಸಿದ್ದರು. ಆದರೆ ಸ್ಥಳೀಯ ಅಧಿಕಾರಿಗಳು ಯಾವುದೇ ಒತ್ತುವರಿ ತೆರವು ಮಾಡದೆಯೇ ಆಗಿದೆ ಎಂದು ಸುಳ್ಳು ವರದಿ ನೀಡಿದ್ದಾರೆ ಎಂದು ಆರೋಪಿಸಿದರು.

ಸುಳ್ಳುವರಿ ನೀಡಿರುವ ಅಧಿಕಾರಿಗಳ ಮೇಲೂ ಕ್ರಮ ಆಗಬೇಕು. ರುದ್ರಭೂಮಿ ಉಳುಮೆ ಮಾಡಿದರೆ ಕಠಿಣ ಶಿಕ್ಷೆ ಅಂತಾರೆ, ಆದರೆ ಇಲ್ಲಿ ಯಾವುದೇ ಕ್ರಮ ಆಗಿಲ್ಲ. ಈ ಬಗ್ಗೆ ವಾಸ್ತವ ವರದಿಯನ್ನು ಲೋಕಾಯುಕ್ತರಿಗೆ ಸಲ್ಲಿಸುವೆ ಎಂದರು. ಸುದ್ದಿಗೋಷ್ಠಿಯಲ್ಲಿ ರೈತಸಂಘದ ಮರೀಗೌಡ, ಮಂಜೇಗೌಡ ಇದ್ದರು.

# ಕ್ಯೂಬ್ ಜೋಡಣೆಯಲ್ಲಿ ಪರಿಣಿತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸತ್ಯ ಮಂಗಲ ಬಡಾವಣೆಯ ರಂಜಿತಾ-ಅಣ್ಣೇಗೌಡ ದಂಪತಿ ಪುತ್ರ ಪರಿಣಿತ್‌ಗೌಡ ಸಿ.ಎ.ಎಂಬ ಕಿಶೋರ, ಕ್ಯೂಬ್ ಆಟದಲ್ಲಿ ಕಿರಿಯ ವಯಸ್ಸಿನಲ್ಲೇ ಮೇರು ಸಾಧನೆ ಮಾಡಿದ್ದಾನೆ.

ಚಿಕ್ಕಂದಿನಿಂದಲೂ ಯುಟ್ಯೂಬ್ ನೋಡುತ್ತಲೇ ಕ್ಯೂಬ್ ಜೋಡಿಸುವ ಕ್ರೀಡೆ ಕಲಿತ ಈ ಪೋರ, ಈಗ ಸಾಕಷ್ಟು ಪಳಗಿ ಮೊದಲು ಇಂಡಿಯಾ ನಂತರ ಏಷ್ಯಾ ಬುಕ್ ಆಫ್ ರೆಕಾರ್ಡ್ ಸಾಧನೆ ಮಾಡಿದ್ದಾನೆ.

ಹೆತ್ತವರ ಸಹಕಾರದಿಂದ ಯಾರೂ ಗುರು ಇಲ್ಲದೇ ತಾನೇ ನೋಡಿ ಕ್ಯೂಬ್ ಜೋಡಣೆ ಕಲಿತಿರುವ ಪರಿಣಿತ್, ಈಗ ಕಣ್ಮುಚ್ಚಿಕೊಂಡೂ, ನಿಗದಿತ ಸಮಯದೊಳಗೆ ಅಂದುಕೊಂಡ ಗುರಿ ಮುಟ್ಟಬಲ್ಲಷ್ಟು ಚಾಕಚಕ್ಯತೆ ಮೈಗೂಡಿಸಿಕೊಂಡಿದ್ದಾನೆ.




ಈ ಆಟದಲ್ಲಿ ಹಂತ ಹಂತವಾಗಿ ಮೇಲೇರುತ್ತಿರುವುದು ಈತನ ಬುದ್ಧಿಮತ್ತೆಗೆ ಸಾಕ್ಷಿಯಾಗಿದೆ. 2★2 ಕ್ಯೂಬ್, ಪ್ಯಾರಾಮಿನಿಕ್ಸ್ , ಮಿನಿ ಪೆನ್‌ರೋಸ್, 3★3 ಮಿರರ್ ಕ್ಯೂಬ್, ವಿಂಡ್‌ಮಿಲ್ ಕ್ಯೂಬ್ ಸೇರಿ ಎಂಟು ವಿಧದ ರುಬಿಕ್ಸ್ ಕ್ಯೂಬ್ ಜೋಡಣೆಯನ್ನು ಯಶಸ್ವಿಯಾಗಿ ಮಾಡುವಷ್ಟು ಪರಿಣಿತರಾಗಿದ್ದಾನೆ ಈ ಎಲ್ಲವನ್ನೂ ನಿಮಿಷದ ಒಳಗೆ ಮಾಡಿ ಮುಗಿಸುತ್ತಾನೆ.

ಬೇರೆಯವರು ಜೋಡಣೆ ಟೈಂ ನೋಡಿಕೊಂಡು ಅದರ ಒಳಗೆ 8 ವಿವಿಧ ಕ್ಯುಬ್ ಜೋಡಿಸುತ್ತಾನೆ. ಇದೇ ಕಾರಣಕ್ಕೆ ಈಗ ಕ್ಯೂಬ್ ಗ್ರಾಂಡ್ ಮಾಸ್ಟರ್ ಎಂಬ ಗೌರವಕ್ಕೆ ಪಾತ್ರನಾಗಿದ್ದಾನೆ. ಮುಂದೆ ಗಿನ್ನೀಸ್ ದಾಖಲೆ ಮಾಡುವ ಆಸೆ ಹೊಂದಿದ್ದಾನೆ.

ಅದಕ್ಕೂ ಈಗಾಗಲೇ ಸಿದ್ಧತೆ ಆರಂಭಿಸಿದ್ದು, ಕೆಲವೇ ತಿಂಗಳಲ್ಲಿ ಅದೂ ಕೈಗೂಡುವ ವಿಶ್ವಾಸದಲ್ಲಿದ್ದಾನೆ.

ತಾಯಿ ರಂಜಿತಾ ಮಾತನಾಡಿ, ನನ್ನ ಮಗ ಚೆಸ್‌ನಲ್ಲಿ ಗ್ರಾಂಡ್ ಮಾಸ್ಟರ್ ಆಗಬೇಕು ಎಂದು ಆಸೆ ಇತ್ತು. ಈಗ ಕ್ಯೂಬ್ ಜೋಡಣೆಯಲ್ಲಿ ಅದು ಕೈಗೂಡಿಸುವುದು ಖುಷಿ ತಂದಿದೆ.

ಸದ್ಯ ಪೋದಾರ್ ಶಾಲೆಯಲ್ಲಿ 7 ನೇ ತರಗತಿ ಓದುತ್ತಿರುವ ಮಗ ಇನ್ನಷ್ಟು ಸಾಧನೆ ಮಾಡಬೇಕು ಎಂಬುದು ನಮ್ಮ ಆಸೆ. ಅದಕ್ಕಾಗಿ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು.

# ಆನೆ ಆಪರೇಷನ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಮೊನ್ನೆಯಷ್ಟೇ ಮಹಿಳೆಯೊಬ್ಬರನ್ನು ಬಲಿ ಪಡೆದ ಪುಂಡಾನೆಯನ್ನು ಸೆರೆ ಹಿಡಿಯುವ ಕಾರ್ಯಾಚರಣೆ ಆರಂಭವಾಗಿದೆ. ನಿನ್ನೆಯೇ ಕುಮ್ಕಿ ಆನೆಗಳ ತಂಡ ಆಲೂರು ತಾಲೂಕಿನ ಭೈರಾಪುರಕ್ಕೆ ಆಗಮಿಸಿದೆ.

ಧನಂಜಯ, ಲಕ್ಷ್ಮಣ, ಶ್ರೀರಾಮ, ಅಯ್ಯಪ್ಪ ಮತ್ತು ಸುಗ್ರೀವ ಆನೆಗಳು ಈ ತಂಡದಲ್ಲಿದ್ದು, ಇವುಗಳೊಂದಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಪುಂಡಾನೆ ಸೆರೆ ಹಿಡಿಯುವ ಕಾರ್ಯಾಚರಣೆ ಆರಂಭಿಸಿದ್ದಾರೆ.

ಬೆಳಗ್ಗೆಯಿಂದಲೇ ಆಪರೇಷನ್ ಶುರುವಾಗಿದ್ದು, ಪುಂಡಾನೆಯನ್ನೂ ಪತ್ತೆ ಮಾಡಲಾಗಿದ್ದು, ಶೀಘ್ರವೇ ಬಲೆಗೆ ಬೀಳುವ ಸಾಧ್ಯತೆ ಇದೆ.

ಇತ್ತೀಚೆಗೆ ಆಲೂರು ಸಮೀಪ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಶೋಭ ಅವರ ಮೇಲೆ ಕಾಡಾನೆ ದಾಳಿ ಮಾಡಿ, ಕೊಂದು ಹಾಕಿತ್ತು.

ಕೊಡಗು ಭಾಗದಿಂದ ಬಂದು ಮಹಿಳೆ ಬಲಿ ಪಡೆದ ನರ ಹಂತಕ ಆನೆ ಸೆರೆ ಹಿಡಿಯಬೇಕೆಂಬ ಸ್ಥಳೀಯರ ಒತ್ತಾಯಕ್ಕೆ ಮಣಿದು, ಆನೆ ಸೆರೆಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶಿಸಿದ್ದರು.

ಇದರಿಂದ ಆಕ್ರೋಶಗೊಂಡ ಗ್ರಾಮಸ್ಥರು ಮೃತದೇಹ ಮೇಲೆತ್ತಲು ಬಿಡದೆ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದ್ದರು.

ಪ್ರತಿಭಟನೆಗೆ ಸಾಥ್ ನೀಡಿದ್ದ ಶಾಸಕ ಸಿಮೆಂಟ್ ಮಂಜು ಸ್ಥಳದಿಂದಲೇ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೆ ಕರೆ ಮಾಡಿದ್ದರು. ಕಾಡಾನೆಗಳ ಹಾವಳಿಗೆ ಶಾಶ್ವತ ಪರಿಹಾರ ಕಂಡುಹಿಡಿಯುಂತೆ ಒತ್ತಾಯಿಸಿದ್ದರು.

# ಜ.20 ಬೃಹತ್ ಆರೋಗ್ಯ ಶಿಬಿರ

## ಹಲವು ಆರೋಗ್ಯ ಸಮಸ್ಯೆಗಳ ಬಗ್ಗೆ ಉಚಿತ ತಪಾಸಣೆ-ಚಿಕಿತ್ಸೆ ಶಂಭುಶ್ರೀ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪರಮಪೂಜ್ಯ ಜಗದ್ಗುರು, ಭೈರವೈಕ್ಯ, ವೈದ್ಯಸೇವಾ ರತ್ನ ಪದ್ಮಭೂಷಣ ಶ್ರೀ ಡಾ. ಬಾಲಗಂಗಾಧರನಾಥ ಮಹಾ ಸ್ವಾಮೀಜಿಯವರ ಜನ್ಮದಿನೋತ್ಸವದ ಅಂಗವಾಗಿ, ಶ್ರೀ ಆದಿಚುಂಚನಗಿರಿ ವಿವಿ, ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆದಿಚುಂಚನಗಿರಿ ಆಸ್ಪತ್ರೆ ಆಶ್ರಯದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರವನ್ನು

ಜ.20 ರಂದು ಹಮ್ಮಿಕೊಳ್ಳಲಾಗಿದೆ ಎಂದು ಹಾಸನ ಮಠದ ಪರಮಪೂಜ್ಯ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ಇಂದು ಶ್ರೀಮಠದ ಆವರಣದಲ್ಲಿ ಸುದ್ದಿಗೋಷ್ಟಿಯಲ್ಲಿ ಈ ವಿಷಯ ತಿಳಿಸಿದ ಅವರು, ಅಂದು ಬೆಳಗ್ಗೆ 9 ರಿಂದ ಸಂಜೆ 4ರವರೆಗೆ ನಗರದ ಎಂ.ಜಿ ರಸ್ತೆಯಲ್ಲಿರುವ ಆದಿಚುಂಚನಗಿರಿ

ಆಂಗ್ಲ ಮಾಧ್ಯಮ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ ಎಂದರು.




ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ (ಹಾಸನ ಮತ್ತು ಕೊಡಗು), ರೋಟರಿ ಕ್ಲಬ್ ಆಫ್ ಹಾಸನ, ಟೈಗರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಸೇರಿ ಹಲವು ಪ್ರತಿಷ್ಠಿತ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ. ಬಿಜಿಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ಬೆಂಗಳೂರು, ಜಯದೇವ ಹೃದ್ರೋಗ ಸಂಸ್ಥೆ, ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ನಿಮ್ಹಾನ್ಸ್ , ಮಿಂಟೋ ಕಣ್ಣಿನ ಆಸ್ಪತ್ರೆ, ಯನಪೋಯ ಆಸ್ಪತ್ರೆ ಮಂಗಳೂರು, ಬಿಜಿಎಸ್ ಅಪೋಲೋ ಆಸ್ಪತ್ರೆ ಮೈಸೂರು ಸೇರಿದಂತೆ ರಾಜ್ಯದ ಪ್ರಮುಖ ಆಸ್ಪತ್ರೆಗಳು ಈ ಶಿಬಿರಕ್ಕೆ ಕೈಜೋಡಿಸಿವೆ ಎಂದರು.

ಜಗದ್ಗುರು ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ದಿವ್ಯ ಸಾನಿಧ್ಯವಹಿಸುವರು. ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಹಾಗೂ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹಾಗೂ ಉದ್ಯಮಿ ಎಸ್. ಎಸ್. ರಘುಗೌಡ ಉಪಸ್ಥಿತರಿರಲಿದ್ದಾರೆ. ಶಿಬಿರದಲ್ಲಿ ಹೃದ್ರೋಗ, ಮಕ್ಕಳ ರೋಗ, ಮೂತ್ರಪಿಂಡ, ಕಿವಿ, ಮೂಗು, ಗಂಟಲು, ಸ್ತ್ರೀ ಮತ್ತು ಪ್ರಸೂತಿ, ನರರೋಗ, ಮಾನಸಿಕ ಆರೋಗ್ಯ, ಕ್ಯಾನ್ಸರ್ ತಪಾಸಣೆ, ಕಣ್ಣಿನ ತಪಾಸಣೆ, ದಂತ ಚಿಕಿತ್ಸೆ , ಮಧುಮೇಹ, ಚರ್ಮರೋಗ ವಿಭಾಗಗಳ ನುರಿತ ತಜ್ಞ ವೈದ್ಯರು ಉಚಿತವಾಗಿ ತಪಾಸಣೆ ಮಾಡುವರು. ಅಗತ್ಯ ಬಿದ್ದವರಿಗೆ ಶಸ್ತ್ರ ಚಿಕಿತ್ಸೆ , ರಕ್ತ ಪರೀಕ್ಷೆ, ಇಸಿಜಿ ಪರೀಕ್ಷೆ ಹಾಗೂ ಉಚಿತ ಔಷಧಿ ವಿತರಣೆ ಮಾಡಲಾಗುತ್ತದೆ.

ದೃಷ್ಟಿದೋಷವುಳ್ಳ ಶಾಲಾ ಮಕ್ಕಳಿಗೆ ಉಚಿತ ಕನ್ನಡಕ ಹಾಗೂ ಶ್ರವಣ ದೋಷ ಯಂತ್ರ ವಿತರಿಸಲಾಗುವುದು. ಸ್ತ್ರೀಯರಿಗೆ ಬಿಳಿಸೆರಗು, ಬಂಜೆತನ, ಗರ್ಭಕೋಶ ಸಂಬಂಧಿತ ಸಮಸ್ಯೆಗಳಿಗೆ

ತಜ್ಞ ವೈದ್ಯರಿಂದ ಸಮಗ್ರ ಚಿಕಿತ್ಸೆ ನೀಡಲಾಗುತ್ತದೆ ಎಂದು ಹೇಳಿದರು.

ಜೊತೆಗೆ ಉಚಿತ ಕಿಡ್ನಿ ತಪಾಸಣೆ ಮತ್ತು ಸಲಹಾ ಶಿಬಿರವೂ ಇದೆ. ಡಾ.ನರೇಂದ್ರ ಎಸ್ (ಯುರೋಲಜಿಸ್ಟ್ ಮತ್ತು ಕಿಡ್ನಿ ಟ್ರಾನ್ಸ್ ಪ್ಲಾಂಟ್ ಸರ್ಜನ್), ಡಾ. ಅನಿಲ್ ಕುಮಾರ್ ಬಿ.ಟಿ, ಡಾ. ನಂದೀಶ್ ವಿ ಹಾಗೂ ಡಾ.ಚೇತನ್ ಸಿ.ಎಸ್. ಸೇರಿ ಪ್ರಖ್ಯಾತ ನೆಫ್ರಾಲಜಿಸ್ಟ್ ಹಾಗೂ ಟ್ರಾನ್ಸ್ ಪ್ಲಾಂಟ್ ತಜ್ಞರು ಭಾಗವಹಿಸಲಿದ್ದಾರೆ. ಜಿಲ್ಲೆ ಹಾಗೂ ಸುತ್ತಮುತ್ತಲ ಜನರು ಇದರ ಲಾಭ ಪಡೆದುಕೊಳ್ಳುವಂತೆ ಕೋರಿದರು.

ಆದಿಚುಂಚನಗಿರಿ ಆಸ್ಪತ್ರೆಯಲಿ ಇದುವರೆಗೂ 30 ಜನರಿಗೆ ಕಿಡ್ನಿ ಕಸಿ ಶಸ್ತ್ರ ಚಿಕಿತ್ಸೆ ಮಾಡಲಾಗಿದ್ದು, ಗುಣಮುಖರಾಗಿರುವ ಕೆಲವರು ತಮ್ಮ ಅನಿಸಿಕೆ ಹಂಚಿಕೊಂಡರು. ಇದೇ ವೇಳೆ ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಕನ್ನಡಕ ವಿತರಿಸಲಾಯಿತು. ಹೆಚ್ಚಿನ ಮಾಹಿತಿಗಾಗಿ 9448581730, 9844279818, 8105597200, 7204247703 ನಂಬರ್ ಸಂಪರ್ಕಿಸಬಹುದಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಡಾ. ನರೇಂದ್ರ ಎಸ್, ಡಾ.ಬಿ.ಟಿ. ಅನಿಲ್ ಕುಮಾರ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಅಧ್ಯಕ್ಷ ಹೆಚ್.ಪಿ.ಮೋಹನ್, ಒಕ್ಕಲಿಗರ ಸಂಘದ ನಿರ್ದೇಶಕ ರಘುಗೌಡ,

ಖಾಸಗಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಿವರಾಮೇಗೌಡ, ಟೈವಸ್ ಕಾರ್ಯದರ್ಶಿ ಬಿ.ಕೆ. ಗಂಗಾಧರ್, ಡಾ.ಕುಮಾರ್, ರೋಟರಿ ಕ್ಲಬ್‌ನ ನಿಶ್ಚಯ್, ಧರ್ಮೇಂದ್ರ ಇದ್ದರು.

# ಲಿಂಗೈಕ್ಯ ಶ್ರೀ ನೀಲಲೋಚನ ಸ್ವಾಮೀಜಿ ಅವರ ಪುಣ್ಯ ಸ್ಮರಣೋತ್ಸವ 19 ರಂದು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಮಾಡಾಳು: ಗ್ರಾಮದ ಇತಿಹಾಸ ಪ್ರಸಿದ್ಧ ಪುಣ್ಯ ಕ್ಷೇತ್ರ ಮೂಲಸ್ಥಾನ ಶ್ರೀ ಗೌರಮ್ಮ ದೇವಿ ದೇವಾಲಯದಲ್ಲಿ ಜ.19ರಂದು ಹಾರನಹಳ್ಳಿ ಕೋಡಿಮಠದ ಲಿಂಗೈಕ್ಯ ಶ್ರೀ ನೀಲಲೋಚನ ಸ್ವಾಮೀಜಿ ಅವರ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ಜಗದ್ಗುರು ಡಾ.ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಜರುಗಲಿದೆ ಎಂದು ಗೌರಮ್ಮ ದೇವಿ ಸೇವಾ ಸಮಿತಿ ಅಧ್ಯಕ್ಷ ಎಂ.ಎಸ್ ನಟರಾಜ್ ತಿಳಿಸಿದರು

ತಾಲೂಕಿನ ಕಣಕಟ್ಟೆ ಹೋಬಳಿ ಮಾಡಾಳು ಗ್ರಾಮದ ಶ್ರೀ ಅಮ್ಮನವರ ದೇವಾಲಯದಲ್ಲಿ ಮಾತನಾಡಿದ ಅವರು, ಜಗದ್ಗುರು ಸತ್ ಸಂಕಲ್ಪದಂತೆ ಹಾಗೂ ಅವರ ಅಪ್ಪಣೆ ಮೇರೆಗೆ ಈ ಪುಣ್ಯ ಸಂಸ್ಕರಣೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದರು.

ಅಂದು ಬೆಳಿಗ್ಗೆ ಮುಂಜಾನೆ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀಗಳವರ ಕರ್ತೃ ಗದ್ದುಗೆಗೆ ರುದ್ರಾಭಿಷೇಕ ಪಂಚಾಭಿಷೇಕ ಸಹಸ್ರ ಬಿಲ್ವಾರ್ಚನೆಯನ್ನು ಪುರೋಹಿತರು ನೂರಾರು ಭಕ್ತರ ಸಮ್ಮುಖದಲ್ಲಿ ಧಾರ್ಮಿಕ ವಿಧಿ ವಿಧಾನಗಳಿಂದ ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಗುವುದು ಎಂದರು. ಸಂಜೆ 4.30 ಗಂಟೆಗೆ ಗ್ರಾಮದ ಅಮ್ಮನವರ ಮೂಲ ಸನ್ನಿಧಿಯಿಂದ ಶ್ರೀ ನೀಲಲೋಚನ ಸ್ವಾಮೀಜಿಯವರ ಭಾವ ಚಿತ್ರವನ್ನು ಪುಷ್ಪಾಲಂಕೃತ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಮಂಗಲ ವಾದ್ಯದೊಂದಿಗೆ ಮೂಲಸ್ಥಾನ

ಗೌರಮ್ಮ ದೇವಿ ದೇವಾಲಯಕ್ಕೆ ಭಕ್ತರೊಡಗೂಡಿ ಕರೆ ತರಲಾಗುವುದು ಎಂದರು. ಸಂಜೆ 6ಗಂಟೆಗೆ ಸಭಾ ಕಾರ್ಯಕ್ರಮ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಸಕ ಹಾಗೂ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಕೆ.ಎಂ ಶಿವಲಿಂಗೇಗೌಡ ನೆರವೇರಿಸುವರು ಎಂದು ತಿಳಿಸಿದರು.

ಅನಂತಪುರಂ ಬೆಕ್ಕಿನ ಕಲ್ಮಠದ ಶ್ರೀ ಮಲ್ಲಿಕಾರ್ಜುನ ಮುರುಘ ರಾಜೇಂದ್ರ ಸ್ವಾಮೀಜಿ ಸಮ್ಮುಖದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಬೊಮ್ಮನಹಳ್ಳಿ ವಿರಕ್ತಮಠದ ಶ್ರೀ ಶಿವಯೋಗೀಶ್ವರ ಸ್ವಾಮೀಜಿ, ಬೆಳಗಾವಿ ಹಿರೇಮಠದ ಮೃತ್ಯುಂಜಯ ಸ್ವಾಮೀಜಿ, ಮಾಡಾಳು ನಿರಂಜನ ಪೀಠದ ಶ್ರೀ ರುದ್ರಮುನಿ ಸ್ವಾಮೀಜಿ, ಮೂರು ಕಳಸ ಮಠದ ಶ್ರೀ ಜ್ಞಾನಪ್ರಭು ಸಿದ್ದರಾಮ ದೇಶಿಕೇಂದ್ರ ಸ್ವಾಮೀಜಿ, ಕೇದಿಗೆ ಮಠಕೋಳಗುಂದ ಮಠದ ಶ್ರೀ ಜಯ ಚಂದ್ರಶೇಖರ ಸ್ವಾಮೀಜಿ ಇವರು ಪಾಲ್ಗೊಳ್ಳುವರು. ಪ್ರಾಸ್ತಾವಿಕ ನುಡಿಗಳನ್ನು ಕೋಡಿ ಮಠದ ಉತ್ತರಾಧಿಕಾರಿ ಶ್ರೀ ಚೇತನ್ ಮರಿದೇವರು ನುಡಿಯಲ್ಲಿದ್ದಾರೆ. ಅತಿಥಿಗಳಾಗಿ ಸಂಸದ ಎಂ. ಶ್ರೇಯಸ್ ಪಟೇಲ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಾಜಿ ಶಾಸಕರಾದ ಕೆ.ಪಿ.ಪ್ರಭುಕುಮಾರ್, ಜಿ.ಎಸ್ ಪರಮೇಶ್ವರಪ್ಪ, ಜೇನುಕಲ್ ಸಿದ್ದೇಶ್ವರ ಟ್ರಸ್ಟ್ ಅಧ್ಯಕ್ಷ ಜಿ.ಬಿ ಬಸವರಾಜ್ ಕಾಂಗ್ರೆಸ್ ಮುಖಂಡ ಜಿ.ಬಿ ಶಶಿಧರ್ ಹಾಗೂ ಜನಪ್ರತಿನಿಧಿಗಳು, ಸಾಹಿತಿಗಳು, ಕಲಾವಿದರು, ರಾಜಕೀಯ ಮುಖಂಡರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಕೋಡಿಮಠ ಮಹಾಸಂಸ್ಥಾನದ ವ್ಯವಸ್ಥಾಪಕ ಜಿ.ಎಸ್ ದಕ್ಷಿಣ ಮೂರ್ತಿ ಇದ್ದರು.

# MEIF ನಿಂದ ಉಚಿತ ನೀಟ್, ಸಿಇಟಿ ಕ್ರ್ಯಾಶ್ ಕೋರ್ಸ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಸ್ಲಿಮ್ ಶಿಕ್ಷಣ ಸಂಸ್ಥೆಗಳ ಒಕ್ಕೂಟ (ಮೀಫ್) ಕೇಂದ್ರ ಸಮಿತಿಯ ವತಿಯಿಂದ ಯೆನೆಪೊಯ ಪಿಯು ಕಾಲೇಜಿನ ಸಹಯೋಗದಲ್ಲಿ ದ್ವಿತೀಯ ಪಿಯು ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗಾಗಿ ಮಾರ್ಚ್ 21ರಿಂದ ಮೇ 1ರ ವರೆಗೆ 45 ದಿನಗಳ ಉಚಿತ ನೀಟ್, ಸಿಇಟಿ. ಕ್ರಾಶ್ ಕೋರ್ಸ್ ಅನ್ನು ಮಂಗಳೂರಿನ ಯೆನೆಪೊಯ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ.

ಎರಡು ಪ್ರತ್ಯೇಕ ಬ್ಯಾಚ್ ಗಳಲ್ಲಿ 15 ನುರಿತ ಉಪನ್ಯಾಸಕರಿಂದ ತರಗತಿ ನಡೆಯಲಿದೆ. 200 ಮಂದಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಾಯಿಸುವವರಿಗೆ ಆದ್ಯತೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಯು ಪಿಯುಸಿ (ವಿಜ್ಞಾನ) ಸಿದ್ಧತಾ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಗಳಿಸಿರಬೇಕು. ಶೇ.80ಕ್ಕಿಂತಲೂ ಕಡಿಮೆ ಅಂಕ ಗಳಿಸಿರುವ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತೀ ವಿಷಯದ ಆಧಾರದಲ್ಲಿ ಪ್ರಾಶಸ್ತ್ಯ ನೀಡಲಾಗುವುದು. ಮೀಫ್ ವಿದ್ಯಾ ಸಂಸ್ಥೆಯಲ್ಲಿ ಮತ್ತು ಸರಕಾರಿ ಪಿಯು ಕಾಲೇಜಿನಲ್ಲಿ ಕಲಿತ ವಿದ್ಯಾರ್ಥಿಗಳಿಗೆ ಆಯ್ಕೆಯಲ್ಲಿ ಪ್ರಥಮ ಆದ್ಯತೆ ನೀಡಲಾಗುವುದು. ಮೀಫ್ ವ್ಯಾಪ್ತಿಗೆ ಒಳಪಡುವ ಉಡುಪಿ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳ ವಿದ್ಯಾರ್ಥಿಗಳಿಗಾಗಿ 32 ಉಚಿತ ಹಾಸ್ಟೆಲ್‌ಗಳ ಸೌಲಭ್ಯ ಒದಗಿಸಲಾಗುತ್ತದೆ.

ಆಸಕ್ತ ಅರ್ಹರು ಜ.24ರ ಒಳಗೆ ಅರ್ಜಿ ಸಲ್ಲಿಸಬೇಕು. ನಿಗದಿತ ಅರ್ಜಿ ನಮೂನೆಗಾಗಿ ಸ್ಥಳೀಯ ಮೀಫ್ ವಿದ್ಯಾ ಸಂಸ್ಥೆಗಳ ಪ್ರಾಂಶುಪಾಲರು ಅಥವಾ ಮೀಫ್ ಕಚೇರಿಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗೆ ಮೀಫ್ ನ ಕಛೇರಿ ಮಂಗಳೂರು ಮೊ ಸ. 8792115666. ಹಾಸನ ಮೊ.ಸಂ.: 9844252114, ಅನ್ನು ಸಂಪರ್ಕಿಸಬಹುದು ಎಂದು ಮೀಫ್ ಕೇಂದ್ರ ಸಮಿತಿಯ ಅಧ್ಯಕ್ಷ ಮೂಸಬ್ಬ ಪಿ.ಬ್ಯಾರಿ ಜೋಕಟ್ಟೆ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248